**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೇ ನ್ಯಾಯಿಕ ದಂಡಾಧಿಕಾಗಳ ನ್ಯಾಯಾಲಯ, ಯಾದಗಿರಿ**

**ಸಿ.ಸಿ. ನಂ.562/2025**

**ಫಿರ್ಯಾದುದಾರರು:** ಶ್ರೀ ಸಾಬಣ್ಣ ತಂದೆ ರಾಮಪ್ಪ,

**ವಿರುದ್ಧ**

**ಆಪಾದಿತ:** ಶ್ರೀ ಹನ್ಮಿರೆಡ್ಡಿ ತಂದೆ ಬಸನಗೌಡ ಬಿರಾದರ್,

**ಆಪಾದನೆ**

**ಶ್ರೀ ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(Honor) ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಕೆಳಕಂಡಂತೆ ದೋಷರೋಪಣೆಯನ್ನು ಹೊರಿಸುತ್ತಿದ್ದೇನೆ.**

ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ರೂ.**7,00,000/-**ಗಳನ್ನು ಸಾಲಪಡೆದು ದಿನಾಂಕ **23.01.2024** ರ ಒಳಗಾಗಿ ಮರುಪಾವತಿ ಮಾಡುವುದಾಗಿ ಒಪ್ಪಿಕೊಂಡು ದೂರುದಾರರಿಗೆ ನಿಮ್ಮ ಖಾತೆಯ **114205** ಸಂಖ್ಯೆಯ ಚೆಕನ್ನು ನೀಡಿರುತ್ತೀರಿ. ದಿನಾಂಕ **23.01.2024** ರಂದು ದೂರುದಾರರು ಸದರಿ ಚೆಕ್‌ನ್ನು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಹೆಚ್.ಡಿ.ಎಫ್.ಸಿ ಬ್ಯಾಂಕ್, ಯಾದಗಿರಿ ಶಾಖೆಯ ಮೂಲಕ ಹಾಜರು ಪಡಿಸಿದಾಗ, “12 Drawers signature differs” ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ **24.01.2024** ರಂದು ವಾಪಸ್ಸು ನೀಡಿರುತ್ತಾರೆ. ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **02.02.2024** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ಜಾರಿಯಾಗಿರುತ್ತದೆ. ಆಪಾದಿತನಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ **138**ರ ರಿತ್ಯಾ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಾ ಎಂದು ಆಪಾದಿಸಲಾಗಿದೆ.

ಪ್ರಶ್ನೆ- 1 : ನಿಮ್ಮ ಮೇಲೆ ಹೊರಿಸಲಾಗಿರುವ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ :

ಪ್ರಶ್ನೆ-2  : ನೀವು ಸದರೀ ಆಪಾದನೆಯನ್ನು ಒಪ್ಪಿಕೊಳ್ಳುವಿರಾ? ಅಥವಾ

ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೆ ?

ಉತ್ತರ  :

**(**ಮೇಲ್ಕಂಡಂತೆ ಆಪಾದನೆಯನ್ನು ಆಪಾದಿತಳಿಗೆ ತಿಳಿದ ಭಾಷೆಯಲ್ಲಿ ಓದಿ**,** ತಿಳಿಸಿ ಹೇಳಿ ಅವರು ನೀಡಿದ ಉತ್ತರಗಳನ್ನು ಬರೆದುಕೊಂಡಿರುವುದಾಗಿ ದೃಢೀಕರಿಸಲಾಗಿದೆ**.)**

ದಿನಾಂಕಃ 11.09.2025.
ಸ್ಥಳಃ ಯಾದಗಿರ

ದಿವಾಣಿ ನ್ಯಾಯಾಧಿಶರು
ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
**ಯಾದಗಿರಿ.**